**16-01-2016** - ನ್ಯಾಷನಲ್ ಲಾ ಸ್ಕೂಲ್ ಹಾಗೂ ಕೃಷಿ ಬೆಲೆ ಆಯೋಗದ ಸಹಭಾಗಿತ್ವದಲ್ಲಿ ಹಮ್ಮಿಕೊಂಡ ಕನಿಷ್ಠ ಬೆಂಬಲ ಬೆಲೆಗೆ ಕಾನೂನು ಚೌಕಟ್ಟು ಒದಗಿಸುವ ಬಗ್ಗೆ ಒಂದು ದಿನದ ಕಾರ್ಯಾಗಾರ ಏರ್ಪಡಿಸಲಾಗಿತ್ತು. ಈ ಕಾರ್ಯಾಗಾರದಲ್ಲಿ ಕೃಷಿ ಉತ್ಪನ್ನಗಳ ಬೆಲೆಗಳಿಗೆ ಶಾಸನಬದ್ಧವಾದ ರೂಪವನ್ನು ಕೊಡುವ ಬಗ್ಗೆ ಚರ್ಚಿಸಲಾಯಿತು. ಈ ವಿಚಾರದ ಬಗ್ಗೆ ನ್ಯಾಷನಲ್ ಲಾ ಸ್ಕೂಲ್ ರವರು ಒಂದು ಅಧ್ಯಯನವನ್ನು ತೆಗೆದುಕೊಂಡಿರುತ್ತಾರೆ. ಆ ಅಧ್ಯಯನದ ರೂಪರೇಷೆಗಳನ್ನು ಸಹ ವಿವರವಾಗಿ ಚರ್ಚಿಸಲಾಯಿತು.









